**ಕೃಷಿ ವಿಶ್ವ ವಿದ್ಯಾನಿಲಯ**

**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**

**ಜಿ.ಕೆ.ವಿ.ಕೆ., ಬೆಂಗಳೂರು–560065**

*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 14.10.2022

## ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ

### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

### (ದಿನಾಂಕ 19-10-2022 ರಿಂದ 23-10-2022 ವರೆಗೆ)

| ನಿಯತಾಂಕಗಳು | 19.10.2022 | 20.10.2022 | 21.10.2022 | 22.10.2022 | 23.10.2022 |
|---|---|---|---|---|---|
| ಮಳೆ (ಮಿ ಮಿ) | 8 | 10 | 9 | 8 | 10 |
| ಗರಿಷ್ಠ ಉಷ್ಣಾಂಶ °(ಡಿ.ಸೆ. ) | 29 | 28 | 29 | 28 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 20 | 20 | 20 | 20 |
| ಮೋಡ (ಪ್ರಮಾಣ) | 7 | 8 | 7 | 8 | 7 |
| ಅರ್ದ್ರತೆ 7.20 ಬೆ (ಶೇ) | 90 | 89 | 94 | 95 | 94 |
| ಅರ್ದ್ರತೆ 2.20 ಮ (ಶೇ) | 60 | 68 | 64 | 64 | 65 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 6 | 6 | 11 | 13 | 12 |
| ಗಾಳಿಯ ದಿಕ್ಕು ( ಡಿಗ್ರಿ) | 158 | 60 | 58 | 63 | 32 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಾದ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **28.0-29.0°C** ಮತ್ತು ಕನಿಷ್ಠ **20.0°C** ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **89-95 %** ಇದ್ದು ಮಧ್ಯಾಹ್ನ **60-68 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **6-13** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

**“ಹಸ್ತಕ್ಕೆ ಹದ, ಚಿತ್ತಕ್ಕೆ ಬೆಳೆ!”**

- ಚಿತ್ತ ನಕ್ಷತ್ರದ ಮಳೆಯ ಕಾಲವು ಅಕ್ಟೋಬರ್ ತಿಂಗಳ 11 ರಿಂದ ಅಕ್ಟೋಬರ್ 23 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 55.4 ಮಿ.ಮೀ. ವರೆಗೆ ಮಳೆಯಾಗುತ್ತದೆ.

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ ಸಲಹೆಗಳು | | 1. ರಾಗಿ ಬೆಳೆಗಳಲ್ಲಿ ಕಳೆಗಳ ಸಮಸ್ಯೆ ಹೆಚ್ಚಾಗಿರುತ್ತದೆ ಇದರ ನಿರ್ಮೂಲನೆಗೆ ಅಂತರ ಬೇಸಾಯ ಮಾಡಿ ಕಳೆ ನಿರ್ಮೂಲನೆ ಮಾಡಿ .<br>2. ತೊಗರಿ ಬೆಳೆಯಲ್ಲಿ ಅಂತರ ಬೇಸಾಯ ಮಾಡಿ. |
| ಮುಂಗಾರು ಬೆಳೆಗಳು | ಬೆಳವಣಿಗೆ ಹಂತ/ ಹೂವಿನ ಹಂತ/ ಮಾಗುವ ಹಂತ | **ಈ ಕೆಳಗಿನ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ರಾಗಿ: ಕೆ.ಎಮ್,ಆರ್–301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್–365 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಬಿತ್ತನೆ/ನಾಟಿ ಮಾಡುವುದು.<br>1. ಹೆಚ್ಚು ಮಳೆಯ ಅವಕಾಶವಿರುವುದರಿಂದ ಬೆಳೆಗಳಲ್ಲಿ ಕಳೆಗಳ ಸಮಸ್ಯೆ ಹೆಚ್ಚಾಗಿರುತ್ತದೆ ಇದರ ನಿರ್ಮೂಲನೆಗೆ ಕುಂಟೆ ಹಾಯಿಸುವ ಮುಖಾಂತರ ಅಥವಾ ಕಳೆನಾಶಕವನ್ನು ಸಿಂಪಡಿಸಬೇಕು.<br>2. ಹೆಚ್ಚು ಮಳೆಯ ಅವಕಾಶವಿರುವುದರಿಂದ ಬೆಳೆಗಳಲ್ಲಿ ಬಸಿಗಾಲುವೆ ನಿರ್ಮಿಸಿ ಹೆಚ್ಚಿನ ಮಳೆನೀರನ್ನು ಹೊರಹಾಕಿ.<br>3. ಮೆಕ್ಕೆಜೋಳದಲ್ಲಿ ತೆನೆಯನ್ನು ತಿನ್ನುವ ಹುಳುವನ್ನು ನಿಯಂತ್ರಿಸಲು ಮ್ಯಾಲಥಿಯಾನ್ 50 ಇ.ಸಿ @ 2 ಮಿ. ಲೀ ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>4. ತೊಗರಿ ಬೆಳೆಯಲ್ಲಿ ಮೊಗ್ಗು ಮತ್ತು ಹೂವಿನ ಹಂತದಲ್ಲಿ ಕಾಯಿಕೊರಕ ಹುಳುವಿನ ಜೈವಿಕ ಹತೋಟಿ ಮಾಡಲು ಎಕರೆಗೆ 200 ಎಲ್.ಇ ನಂಜು ರೋಗಾಣು (ಹೆಚ್.ಎ.ಎನ್.ಪಿ.ವಿ) ಗಳನ್ನು 400 ಲೀಟರ್ ನೀರಿನಲ್ಲಿ ಸೇರಿಸಿ ಶೇ.0.1 ಟೀಪಾಲ್ ಮತ್ತು ಶೇ. 0.5 ರ ಬೆಲ್ಲದ ಪಾಕವನ್ನು ಬೆರೆಸಿ ಸಾಯಂಕಾಲದ ಸಮಯದಲ್ಲಿ ಸಿಂಪಡಿಸಬೇಕು. ಇದರಿಂದ ಮರಿ ಹುಳುಗಳಿಗೆ |

| | | |
|---|---|---|
| | | ನಂಜಾಣು ರೋಗ ತಗಲಿ ತಲೆ ಕೆಳಗಾಗಿ ನೇತಾಡುತ್ತಾ ಸಾಯುತ್ತವೆ ಮತ್ತು ಹೆಲಿಕೊವರ್ಪ ಮೋಹಕ ಬಲೆಗಳನ್ನು ಹೆಕ್ಟೇರ್ ಗೆ 10 ನ್ನು ಬಳಸಬೇಕು ಹಾಗು 20 ದಿನಗಳಿಗೊಮ್ಮೆ ಮೋಹಕ ವಸ್ತು (ಲ್ಯೂರ್) ಬದಲಿಸಬೇಕು.<br>5. ತೊಗರಿ ಬೆಳೆಯಲ್ಲಿ ಸೊರಗು ರೋಗದ ಹತೋಟಿಗೆ ಕಾರ್ಬೆನ್‌ಡೈಜಿಮ್ 50 ಡಬ್ಲೂ. ಪಿ. 2 ಗ್ರಾಂ/ಲೀ ನೀರಿನಲ್ಲಿ ಬೆರೆಸಿ ಬುಡಕ್ಕೆ ಸುರಿಯಿರಿ.<br>6. ಸೊರಗು ರೋಗದ ಗಿಡಗಳನ್ನು ಕಿತ್ತು ಒಂದೆಡೆ ಹಾಕಿ ಸುಡಬೇಕು. |
| ಮಾವು | | 1. ಮಾವಿನ ತೋಪುಗಳಲ್ಲಿ ಒಣ ರೆಂಬೆ ಕೊಂಬೆಗಳನ್ನು ಕತ್ತರಿಸಿ ಹೊರಹಾಕಿ.<br>2. ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು. |
| **ರೇಷ್ಮೆ ಸಾಕಾಣಿಕೆ** | | 1. ರೇಷ್ಮೆ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು. |
| **ಹೈನುಗಾರಿಕೆ** | | |
| | | |
| **ಪಶುಸಂಗೋಪನೆ** | | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಉತ್ತಮ ಮಳೆ ಮತ್ತು ತೇವಾಂಶದ ಆಧಾರದಲ್ಲಿ ಯತೇಚ್ಚ ಹುಲ್ಲು ಮತ್ತು ಮೇವು ಲಭ್ಯವಿರುವುದರಿಂದ ಹೈನುಗಾರಿಕೆ ಬಲವರ್ಧನೆಗೆ ತುಂಬಾ ಸಹಕಾರಿಯಾಗುತ್ತದೆ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |


**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಫ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.